# BLDE

(DEEMED TO BE UNIVERSITY)

**Department of Central Library**

**NEWS PAPER CLIPPINGS**

**NOVEMBER 2023 04.11.2023**

## ಶಾಸ್ತ್ರಜ್ಞರ 34 ನೇ ರಾಷ್ಟ್ರೀಯ ಸಮ್ಮೇಳನ

ವಿಜಯಪುರ: ಶರೀರ ಕ್ರಿಯಾ ಶಾಸ್ತ್ರಜ್ಞರ ರಾಷ್ಟ್ರೀಯ 34ನೇ ಸಮ್ಮೇಳನ ನ. 1ರಿಂದ ನ. 3ರ ವರೆಗೆ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ. ಸಮ್ಮೇಳನ ಆರಂಭದ ಒಂದು ದಿನ ಮುಂಚೆ ನಿರಂತರ ವೈದ್ಯಕೀಯ ಶಿಕ್ಷಣ ಅಂಗವಾಗಿ ಆರೋಗ್ಯ ಮತ್ತು ಸುಖಃಸ್ಥಿತಿ ಶಾರೀರಿಕ ಶಾಸ್ತ್ರ ಕುರಿತು ಕಾರ್ಯಾಗಾರ ನಡೆಯಲಿದೆ. ಈ ರಾಷ್ಟ್ರೀಯ ಸಮ್ಮೇಳನದಲ್ಲಿ ದೆಹಲಿಯ, ಎ.ಐ.ಐ.ಎಂ.ಎಸ್. ನ ನಿವೃತ್ತ ಡೀನ್ ಹಾಗೂ ಐಐಟಿ ಯ ಪ್ರಾಧ್ಯಾಪಕ ಡಾ. ಕೆ. ಕೆ. ದೀಪಕ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುತ್ತಿದ್ದು, 88 ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಖ್ಯಾತಿಯ ಭಾಷಣ ಕಾರರ ಪ್ರಬಂಧ ಮಂಡನೆ ಸೇರಿದಂತೆ ಸುಮಾರು 250 ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿ ನೀಡುವ 6 ರಾಷ್ಟ್ರೀಯ ಭಾಷಣ ಪ್ರಶಸ್ತಿಗಳನ್ನು ಈ ಸಮ್ಮೇಳನದಲ್ಲಿ ನೀಡಿ ಗೌರವಿಸಲಾಗುವುದು. ರಕ್ತನಾಳ, ನರಮಂಡಲ, ನಿರ್ನಾಳಗ್ರಂಥಿ ಶರೀರಕ್ರಿಯಾ ಶಾಸ್ತ್ರ, ರೋಗವಿಜ್ಞಾನ ಮುಂತಾದ ವಿಷಯಗಳ ಕುರಿತು ವಿಚಾರ ಸಂಕಿರಣಗಳನ್ನು ನಡೆಸಿಕೊಡಲಾಗುತ್ತದೆ. ಅಲ್ಲದೆ ಮುಂತಾದವರು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಎಂದು ಶರೀರ ಕ್ರಿಯಾ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಮತ್ತು ಸಂಘಟನಾ ಕಾರ್ಯದರ್ಶಿ ಡಾ, ಲತಾ ಎಂ. ಮುಳ್ಳೂರ ಮಾಹಿತಿ ನೀಡಿದ್ದಾರೆ.

## ನಾಳೆ ಶರೀರ ಕ್ರಿಯಾ ಶಾಸ್ತ್ರಜ್ಞರ ರಾಷ್ಟ್ರೀಯ 34ನೇ ಸಮ್ಮೇಳನ

**ವಿಜಯಪುರ:** ಶರೀರ ಕ್ರಿಯಾ ಶಾಸ್ತ್ರಜ್ಞರ ರಾಷ್ಟ್ರೀಯ 34ನೇ ಸಮ್ಮೇಳನ ನವೆಂಬರ್1ರಿಂದ ಮೂರು ದಿನಗಳ ಕಾಲ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ನಡೆಯಲಿದೆ. ಸಮ್ಮೇಳನ ಆರಂಭದ ಒಂದು ದಿನ ಮುಂಚೆ ನಿರಂತರ ವೈದ್ಯಕೀಯ ಶಿಕ್ಷಣ ಅಂಗವಾಗಿ ಆರೋಗ್ಯ ಮತ್ತು ಸುಖಃಸ್ಥಿತಿ ಶಾರೀರಿಕ ಶಾಸ್ತ್ರ ಕುರಿತು ಕಾರ್ಯಾಗಾರ ನಡೆಯಲಿದೆ. ಈ ರಾಷ್ಟ್ರಿಯ ಸಮ್ಮೇಳನದಲ್ಲಿ ದೆಹಲಿಯ, ಎ.ಐ.ಐ.ಎಂ.ಎಸ್ ವಿಶ್ರಾಂತ ಡೀನ್ ಹಾಗೂ ಐಐಟಿಯ ಪ್ರಾಧ್ಯಾಪಕ ಡಾ.ಕೆ.ಕೆ. ದೀಪಕ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳುತ್ತಿದ್ದು, 88 ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಖ್ಯಾತಿಯ ಭಾಷಣಕಾರರ ಪ್ರಬಂಧ ಮಂಡನೆ ಸೇರಿದಂತೆ ಸುಮಾರು 250 ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ. ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿ ನೀಡುವ 6 ರಾಷ್ಟ್ರೀಯ ಭಾಷಣ ಪ್ರಶಸ್ತಿಗಳನ್ನು ಈ ಸಮ್ಮೇಳನದಲ್ಲಿ ನೀಡಿ ಗೌರವಿಸಲಾಗುವುದು ಎಂದು ಶರೀರ ಕ್ರಿಯಾ ಶಾಸ್ತ್ರ ವಿಭಾಗದ ಮುಖ್ಯಸ್ಥ ಮತ್ತು ಸಂಘಟನಾ ಕಾರ್ಯದರ್ಶಿ ಡಾ.ಲತಾ ಮುಳ್ಳೂರ ಮಾಹಿತಿ ನೀಡಿದ್ದಾರೆ.

## ಬಿಎಲ್‌ಡಿಇ: ಸಂಸ್ಥಾಪನಾ ದಿನಾಚರಣೆ 6ಕ್ಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಸಂಸ್ಥಾಪನಾ ದಿನಾಚರಣೆ ನ.6ರಂದು ಬೆಳಿಗ್ಗೆ 11ಕ್ಕೆ ನಡೆಯಲಿದೆ ಎಂದು ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಆರ್.ಬಿ. ಕೊಟ್ನಾಳ ತಿಳಿಸಿದ್ದಾರೆ.

ಸಂಸ್ಥೆಯ ಬಂಗಾರಮ್ಮ ಸಜ್ಜನ ಆವರಣದ ಬಿ.ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಗ್ರಂಥಾಲಯ ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ.

ಸಾಧಕ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.

ಅಥಣಿಯ ಮೋಟಗಿ ಮಠದ ಪ್ರಭುಚನ್ನಬಸವ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದಾರೆ. ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಸಮ ಕುಲಾಧಿಪತಿ ಪ್ರೊ. ವೈ.ಎಂ. ಜಯರಾಜ ಪ್ರತಿಭಾ ಪುರಸ್ಕಾರ ವಿತರಿಸಲಿದ್ದಾರೆ.

ಪ್ರಧಾನ ಕಾರ್ಯದರ್ಶಿ ಜಿ.ಕೆ. ಪಾಟೀಲ, ಎ.ಎಸ್. ಪಾಟೀಲ, ಪ್ರೊ. ಬಿ.ಎಸ್. ಬೆಳಗಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಎಲ್‌ಡಿಇ ಸಂಸ್ಥೆ ಸಂಸ್ಥಾಪನೆ ದಿನಾಚರಣೆ

**ವಿಜಯಪುರ:** ನಗರದ ಬಿಎಲ್‌ಡಿಇ ಸಂಸ್ಥೆಯ ಸಂಸ್ಥಾಪನೆ ದಿನಾಚರಣೆ ನ.6ರಂದು ಬೆಳಗ್ಗೆ 11ಕ್ಕೆ ಸಂಸ್ಥೆಯ ಬಂಗಾರಮ್ಮ ಸಜ್ಜನ ಆವರಣದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಗ್ರಂಥಾಲಯ ಸಭಾಂಗಣದಲ್ಲಿ ನಡೆಯಲಿದೆ. ಅಥಣಿ ಮೋಟಗಿ ಮಠದ ಪ್ರಭುಚನ್ನಬಸವ ಅಥಣೇಶ ಅವರು ಸಾನ್ನಿಧ್ಯವಹಿಸುವರು. ಬಿಎಲ್‌ಡಿಇ ಡೀಮ್ಡ್ ವಿವಿಯ ಸಮ-ಕುಲಾಧಿಪತಿ ಪ್ರೊ.ವೈ.ಎಂ. ಜಯರಾಜ ಪ್ರತಿಭಾ ಪುರಸ್ಕಾರ ಪ್ರದಾನ ಮಾಡುವರು. ಸಂಸ್ಥೆ ಪ್ರಧಾನ ಕಾರ್ಯದರ್ಶಿ ಜಿ.ಕೆ.ಪಾಟೀಲ, ಎ.ಎಸ್.ಪಾಟೀಲ, ಕಾಲೇಜಿನ ಪ್ರಾಚಾರ್ಯ ಪ್ರೊ.ಬಿ.ಎಸ್.ಬೆಳಗಲಿ, ಸಂಸ್ಥೆಯ ಎಲ್ಲ ನಿರ್ದೇಶಕರು, ನಾನಾ ಕಾಲೇಜುಗಳ ಪ್ರಾಚಾರ್ಯರು ಮತ್ತು ಸಿಬ್ಬಂದಿ ಉಪಸ್ಥಿತರಿರುವರು. ಈ ಸಂದರ್ಭದಲ್ಲಿ ಸಂಸ್ಥೆಯ ಸಾಧಕ ಸಿಬ್ಬಂದಿಗೆ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ಸಂಸ್ಥೆ ಮುಖ್ಯ ಆಡಳಿತಾಧಿಕಾರಿ ಡಾ.ಆರ್.ಬಿ.ಕೊಟ್ನಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವಿಜಯಪುರ ನಗರದ ಎಸ್. ಎಸ್. ಬಾಲಕಿಯರ ಪ್ರೌಢಶಾಲೆಯಲ್ಲಿ ಥೈರಾಯ್ಡ್ ಗ್ರಂಥಿ ಕುರಿತು ಜಾಗೃತಿ ಕಾರ್ಯಕ್ರಮ ನಡೆಯಿತು.

# ಥೈರಾಯ್ಡ್ ಗ್ರಂಥಿ ರೋಗಕ್ಕೆ ಚಿಕಿತ್ಸೆ ಅಗತ್ಯ

ವಿಜಯಪುರ : ಥೈರಾಯ್ಡ್ ಗ್ರಂಥಿ ರೋಗ ಕುರಿತು ಜಾಗೃತಿ ಕಾರ್ಯಕ್ರಮ ಮತ್ತು ಥೈರಾಯ್ಡ್ ಪರೀಕ್ಷೆ ಶಿಬಿರ ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಎಸ್. ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆಯಿತು.

ಶ್ರೀ ಬಿ.ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಈ ಶಿಬಿರ ಆಯೋಜಿಸಲಾಗಿತ್ತು.

ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಡಾ. ಗಿರೀಶ ಕುಲ್ಲೊಳ್ಳಿ ಮಾತನಾಡಿ, ಕಾಯಿಲೆಯ ಮುನ್ಸೂಚನೆಗಳು, ತಪಾಸಣೆ ಹಾಗೂ ಚಿಕಿತ್ಸೆಯ ಮಹತ್ವದ ಕುರಿತು ಅವರು ಮಾಹಿತಿ ನೀಡಿದರು. ಅಲ್ಲದೇ, ಈ ಕಾಯಿಲೆಗೆ ಸೂಕ್ತ ಸಂದರ್ಭದಲ್ಲಿ ತಜ್ಞ ವೈದ್ಯರಿಂದ ಚಿಕಿತ್ಸೆ ಪಡೆದರೆ ಶೀಘ್ರವಾಗಿ ಗುಣಮುಖರಾಗಬಹುದು ಎಂದರು.

ಡಾ. ಶೃತಿ ಶಿಳ್ಳಿನ ಮಾತನಾಡಿ, ಗಳಗಂಡ, ಹೈಪೋಥೈರಾಯ್ಡಿಸಂ ಮತ್ತು ಹೈಪರ್ ಥೈರಾಯಿಡಿಸಮ್ ರೋಗ ಲಕ್ಷಣಗಳು ಮತ್ತು ಅಯೋಡಿನ್ ಕೊರತೆಯನ್ನು ನೀಗಿಸುವ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು. ಈ ಶಿಬಿರದಲ್ಲಿ ಒಟ್ಟು 128 ವಿದ್ಯಾರ್ಥಿನಿಯರಿಗೆ ಥೈರಾಯ್ಡ್ ಪರೀಕ್ಷೆ ನಡೆಸಲಾಯಿತು. ಶಸ್ತ್ರ ಚಿಕಿತ್ಸೆ ವಿಭಾಗದ ವೈದ್ಯರಾದ ಡಾ. ಶಿವರಾಜ ಮಂಗ್ಯಾಳ, ಶಾಲೆಯ ಮುಖ್ಯ ಶಿಕ್ಷಕಿ ವಿ.ಪಿ. ನೀಡೋಣಿ, ಆಸ್ಪತ್ರೆಯ ಸ್ನಾತಕೋತ್ತರ ವಿದ್ಯಾರ್ಥಿಗಳು, ಶಾಲೆಯ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.ಶಾಲೆಯ ಸಹ ಶಿಕ್ಷಕ ಎಂ.ಎಂ. ಅಳ್ಳೊಳ್ಳಿ ಕಾರ್ಯಕ್ರಮ ನಿರೂಪಿಸಿದರು.

BLDE

(DEEMED TO BE UNIVERSITY)

**Department of Central Library**

## NEWS PAPER CLIPPINGS

**NOVEMBER 2023 05.11.2023**

# ಬಿಎಲ್‌ಡಿಇ ಸಂಸ್ಥೆಯಿಂದ ಜಿಲ್ಲೆಯ ಅಭಿವೃದ್ಧಿ



**ವಿಜಯಪುರ:** ಬಸವಾದಿ ಶರಣರ ಆಶಯದಂತೆ ಪ್ರಾರಂಭವಾದ ಬಿಎಲ್‌ಡಿಇ ಸಂಸ್ಥೆ ಜಿಲ್ಲೆಯ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ಸೇರಿದಂತೆ ಸರ್ವತೋಮುಖ ಅಭಿವೃದ್ಧಿಗೆ ಕಾರಣವಾಗಿದೆ ಎಂದು ಅಥಣಿಯ ಮೋಟಗಿಮಠದ ಪ್ರಭುಚನ್ನಬಸವ ಶ್ರೀಗಳು ಹೇಳಿದರು.

ನಗರದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಗ್ರಂಥಾಲಯ ಸಭಾಂಗಣದಲ್ಲಿ ನಡೆದ ಬಿಎಲ್‌ಡಿಇ ಸಂಸ್ಥೆಯ ಸಂಸ್ಥಾಪನೆ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಿಎಲ್‌ಡಿಇ ಡೀಮ್ಡ್ ವಿವಿಯ ಸಮಕುಲಾಧಿಪತಿ ಡಾ.ವೈ.ಎಂ.ಜಯರಾಜ ಮಾತನಾಡಿ, ನಮ್ಮ ಸಾಧು, ಸಂತರು ಪೂಜೆ, ಪುನಸ್ಕಾರಗಳ ಜೊತೆ ವಿದ್ಯಾಭ್ಯಾಸಕ್ಕೆ ಪ್ರಾಮುಖ್ಯತೆ ನೀಡದೇ ಹೋಗಿದ್ದರೆ ನಾವು ನಿರಕ್ಷರಿಗಳಾಗಿ ಉಳಿಯಬೇಕಿತ್ತು. ಬಿಎಲ್‌ಡಿಇ ಸಂಸ್ಥೆ ಸಂಸ್ಥಾಪಕರ ದೂರದೃಷ್ಟಿಯ ಫಲವಾಗಿ ಇಂದು ಜಿಲ್ಲೆಯಲ್ಲಿ ಶೈಕ್ಷಣಿಕ ಕ್ರಾಂತಿಯಾಗಿದೆ. ಸಂಸ್ಥೆಯ ಅಧ್ಯಕ್ಷ ಎಂ.ಬಿ.ಪಾಟೀಲ ಅವರು ಇಂದಿನ ಉದಾರೀಕರಣ, ಜಾಗತೀಕರಣ, ಖಾಸಗೀಕರಣಕ್ಕೆ ಅಗತ್ಯಕ್ಕೆ ಅನುಗುಣವಾಗಿ ಹೆಮ್ಮರವಾಗಿ ಬೆಳೆಸಿದ್ದಾರೆ ಎಂದರು.

ಸಂಸ್ಥೆ ನಿರ್ದೇಶಕ ಸಂಗು ಸಜ್ಜನ ಮಾತನಾಡಿ, ಬಿಎಲ್‌ಡಿಇ ಸಂಸ್ಥೆ ಸಾಮಾನ್ಯರಿಗೆ ಶಿಕ್ಷಣ ನೀಡಿ ಜಾಣರನ್ನಾಗಿ ಮಾಡುವ ಕಾಯಕದಲ್ಲಿ ನಿರತವಾಗುವ ಮೂಲಕ ಸಂಸ್ಥಾಪಕರ ಕನಸನ್ನು ನನಸು ಮಾಡುತ್ತಿದೆ. ಇಲ್ಲಿ ಬೋಧನೆ ಮಾಡಿದ ಶಿಕ್ಷಕರು ಮತ್ತು ಕಲಿತ ವಿದ್ಯಾರ್ಥಿಗಳ ಆದರ್ಶಗಳಿಂದ ಹೆಮ್ಮರವಾಗಿ ಬೆಳೆದಿದೆ ಎಂದರು.

2022-23ನೇ ಶೈಕ್ಷಣಿಕ ವರ್ಷದಲ್ಲಿ ಸಂಶೋಧನೆ ಮಾಡಿದ 59 ನಾನಾ ಪ್ರಾಧ್ಯಾಪಕರು ಹಾಗೂ ರ‍್ಯಾಂಕ್ ವಿಜೇತ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ಬಿಎಲ್‌ಡಿಇ ಸಂಸ್ಥೆ ಮುಖ್ಯ ಆಡಳಿತಾಧಿಕಾರಿ ಡಾ.ಆರ್.ಬಿ.ಕೊಟ್ನಾಳ, ಆಡಳಿತಾಧಿಕಾರಿಗಳಾದ ಪ್ರೊ.ಬಿ.ಆರ್.ಪಾಟೀಲ, ಪ್ರೊ.ಎ.ಎಸ್.ಕಾಳಪ್ಪನವರ, ಪ್ರೊ.ಎಸ್.ಎಚ್.ಲಗಳಿ, ಕ್ರೀಡಾ ನಿರ್ದೇಶಕ ಪ್ರೊ.ಎಸ್.ಎಸ್.ಕೋರಿ, ಬಿಎಲ್‌ಡಿಇ ಡೀಮ್ಡ್ ವಿವಿ ಕುಲಸಚಿವ ಡಾ.ಆರ್.ವಿ.ಕುಲಕರ್ಣಿ, ಸಮಕುಲಪತಿ ಡಾ.ಅರುಣ ಇನಾಮದಾರ, ಡಾ.ಕುಶಾಲದಾಸ, ಪ್ರೊ.ಬಿ.ಎಂ.ನುಚ್ಚಿ, ವಿಶ್ರಾಂತ ಪ್ರಾಚಾರ್ಯ ಎಸ್.ಜಿ.ತಾಳಿಕೋಟಿ, ಎಂ.ಎಸ್.ಝುಳಕಿ, ಎ.ಎಸ್.ಬಗಲಿ, ಡಾ.ವೈ.ಬಿ.ಪಟ್ಟಣಶೆಟ್ಟಿ, ಡಾ.ವಿ.ಡಿ.ಐಹೊಳ್ಳಿ, ಡಾ.ಎಂ.ಎಸ್.ಮದಭಾವಿ, ಮುತ್ತುರಾಜ ಮಾದನಭಾವಿ ಮತ್ತಿತರರಿದ್ದರು.

---

ಸಂಯುಕ್ತ ಕರ್ನಾಟಕ

ಶುಕ್ರವಾರ, 10, ನವೆಂಬರ್, 2023 | ಬಾಗಲಕೋಟೆ | BAGALAKOTE | 09

### ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿಯ ರಾಷ್ಟ್ರೀಯ ಸಮ್ಮೇಳನ: 250 ಪ್ರತಿನಿಧಿಗಳು ಭಾಗಿ

# ಬಿಎಲ್‌ಡಿಇ ವಿದ್ಯಾರ್ಥಿಗಳಿಗೆ ಉದಯೋನ್ಮುಖ ವಿಜ್ಞಾನಿ ಪ್ರಶಸ್ತಿ ಪ್ರದಾನ

**ವಿಜಯಪುರ:** ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿಯ 34ನೇ ರಾಷ್ಟ್ರೀಯ ಸಮ್ಮೇಳನ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ಮೂರು ದಿನಗಳ ಕಾಲ ನಡೆಯಿತು.

ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಕುಲಪತಿ ಡಾ. ಆರ್.ಎಸ್. ಮುಧೋಳ ಅಧ್ಯಕ್ಷತೆ ವಹಿಸಿದ್ದರು. ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿ ಅಧ್ಯಕ್ಷ ಡಾ. ಅಮರಕೆ.ಚಂದ್ರ, ಪ್ರಧಾನ ಕಾರ್ಯದರ್ಶಿ ಡಾ. ರಾಜನ ಹಲ್ದಾರ, ಕಾಲೇಜಿನ ಪ್ರಾಚಾರ್ಯ ಡಾ. ಅರವಿಂದ ಪಾಟೀಲ ಉಪಸ್ಥಿತರಿದ್ದರು. ಸಮ್ಮೇಳನ ಆಯೋಜನಾ ಸಮಿತಿಯ ಅಧ್ಯಕ್ಷೆ ಡಾ. ಸುಮಂಗಲಾ ಪಾಟೀಲ, ಡಾ. ಶ್ರೀಲಕ್ಷ್ಮೀ ಬಗಲಿ ಕಾರ್ಯಕ್ರಮ ನಿರ್ವಹಿಸಿದರು.




ವಿಜಯಪುರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದಲ್ಲಿ ನಡೆದ ರಾಷ್ಟ್ರೀಯ ಶರೀರಕ್ರಿಯಾ ಶಾಸ್ತ್ರಜ್ಞರ ಸೊಸೈಟಿಯ ಆಶ್ರಯದಲ್ಲಿ ಏರ್ಪಡಿಸಲಾಗಿದ್ದ 34ನೇ ರಾಷ್ಟ್ರೀಯ ಸಮ್ಮೇಳನಕ್ಕೆ ಚಾಲನೆ ನೀಡಿದ ಸಂದರ್ಭ.

ಸಮ್ಮೇಳನದ ಮೂರನೇ ದಿನ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿಗಳಾಗಿ ನವದೆಹಲಿಯ ಝಾಮಿಯಾ ಹಮ್ದರ್ದ್ ವಿಶ್ವವಿದ್ಯಾಲಯದ ಡಾ. ಮೊಹಮ್ಮದ್‌ಇಕ್ಬಾಲ್ ಆಲಂ, ಬೆಂಗಳೂರಿನ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಡಾ. ಪಿ.ಎಸ್. ಶಂಕರ, ಬ್ರೆಝಿಲ್‌ನ ಪ್ರೊ. ಬೆನಿಡಿತೊ ಮಶಾಡೋ, ದಕ್ಷಿಣಆಫ್ರಿಕಾದ ಪ್ರಿಟೋರಿಯಾದ ಪ್ರೊ. ಟ್ರೆವರ್‌ಎಸ್, ಮೆಕ್ಸಿಕೋದ ಡಾ. ಜೋಸ್ ಆಂಟೋನಿಯೋ ಕಾರ್ಮೊಸ್ ಸಾವ್ರೆಜೊ, ಜೋಧಪುರ ಎಐಐಎಂಎಸ್‌ನ ಡಾ. ಪ್ರಸನ್ನಪ್ರಿಯ ನಾಯಕ ಮುಂತಾದವರು ವಿಶೇಷ ಉಪನ್ಯಾಸ ಮಂಡಿಸಿದರು.

ಸೊಸೈಟಿಯಿಂದ ನೀಡಲಾಗುವ ಆರು ರಾಷ್ಟ್ರೀಯ ವಿಶೇಷ ಉಪನ್ಯಾಸಗಳಲ್ಲಿ ಒಂದಾದ ಪ್ರೊ. ಬಿ.ಬಿ. ಸರ್ಕಾರ್ ಸ್ಮಾರಕ ಸ್ವರ್ಣ ಪದಕ ವಿಶೇಷ ಉಪನ್ಯಾಸವನ್ನು ಡಾ. ಲತಾ ಮುಳ್ಳೂರ ಪ್ರಕಟಿಸಿದರು. ರಾಷ್ಟ್ರೀಯ ಶರೀರಶಾಸ್ತ್ರಜ್ಞರ ಸೊಸೈಟಿಯ ಉದಯೋನ್ಮುಖ ವಿಜ್ಞಾನಿ ಸ್ವರ್ಣಪದಕ ಪ್ರಶಸ್ತಿಗಳನ್ನು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ರೋಗನಿಧಾನ ಶಾಸ್ತ್ರ ವಿಭಾಗದ 2ನೇ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿ ಡಾ. ಸಯನ್ ದೀಪದಾಸ್ ಮತ್ತು ಜೀವರಸಾಯನ ಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿನಿ ಸೌಮ್ಯ ತುಂಗಳ ಅವರಿಗೆ ಪ್ರದಾನ ಮಾಡಲಾಯಿತು.

ದೇಶದ ನಾನಾ ರಾಜ್ಯಗಳಿಂದ ಆಗಮಿಸಿದ್ದ ಸುಮಾರು 250 ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಬಿ.ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಶರೀರಕ್ರಿಯಾ ಶಾಸ್ತ್ರ ವಿಭಾಗ ಈ ಸಮ್ಮೇಳನವನ್ನು ಆಯೋಜಿಸಿತ್ತು.

BLDE

(DEEMED TO BE UNIVERSITY)

**Department of Central Library**

**NEWS PAPER CLIPPINGS**

**NOVEMBER 2023 20.11.2023**

# ಪಾದಕ್ಕೆ ಪ್ರಾಮುಖ್ಯತೆ ಕೊಡಿ




ವಿಜಯಪುರದ ಬಿಎಲ್‌ಡಿಇ ಆಸ್ಪತ್ರೆಯಲ್ಲಿ ನಡೆದ ಉಚಿತ ನಡೆದ ಮಧುಮೇಹ ತಪಾಸಣಾ ಶಿಬಿರದ ಸಮಾರೋಪದಲ್ಲಿ ಡಾ.ಮಂಜುನಾಥ ಕೋಟೆಣ್ಣವರ ಮಾತನಾಡಿದರು.

VK - 20|11|2023

**ವಿಜಯಪುರ:** ಮಧುಮೇಹಿಗಳು ಮುಖದಷ್ಟೇ ಪಾದಗಳಿಗೂ ಪ್ರಾಮುಖ್ಯತೆ ನೀಡಬೇಕು ಎಂದು ಬಿಎಲ್‌ಡಿಇ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಮಂಜುನಾಥ ಕೋಟೆಣ್ಣವರ ಹೇಳಿದರು.

ನಗರದ ಬಿಎಲ್‌ಡಿಇ ಡೀಮ್ಡ್ ವಿವಿಯ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರಚಿಕಿತ್ಸಾ ವಿಭಾಗದಿಂದ ಶನಿವಾರ ಆಯೋಜಿಸಿದ್ದ ಮಧುಮೇಹ, ಪಾದ ರೋಗ ಉಚಿತ ತಪಾಸಣೆ ಮತ್ತು ಚಿಕಿತ್ಸಾ ಶಿಬಿರದ ಸಮಾರೋಪವನ್ನುದ್ದೇಶಿಸಿ ಅವರು ಮಾತನಾಡಿದರು.

ಹೆಚ್ಚು ಮಧುಮೇಹಿಗಳು ದೇವಸ್ಥಾನ ದರ್ಶನಕ್ಕೆ ಬರಿಗಾಲಲ್ಲಿ ನಡೆದುಕೊಂಡು ಹೋಗುತ್ತಾರೆ. ಆಗ ಪಾದದ ಸಮಸ್ಯೆಗೆ ಒಳಗಾಗುತ್ತಾರೆ. ಆದ್ದರಿಂದ ಮಧುಮೇಹಿಗಳು ಮನೆಯೇ ದೇವಾಲಯವೆಂದು ತಿಳಿದು ಆದಷ್ಟು ಜಾಗೃತಿ ವಹಿಸಬೇಕು ಎಂದರು.

ಆಸ್ಪತ್ರೆಯ ಅಧೀಕ್ಷಕ ಡಾ.ರಾಜೇಶ ಹೊನ್ನುಟಗಿ ಮಾತನಾಡಿ, ಭಾರತವು ಮಧುಮೇಹದಲ್ಲಿ ವಿಶ್ವದ ರಾಜಧಾನಿಯಾಗುತ್ತಿದೆ. ಮಧುಮೇಹಿಗಳು ರಕ್ತದಲ್ಲಿರುವ ಸಕ್ಕರೆ ಪ್ರಮಾಣವನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳದಿದ್ದರೆ ದೀರ್ಘಕಾಲೀನ ತೊಂದರೆಗಳು ಉಂಟಾಗುತ್ತವೆ ಎಂದರು. ಬಿಎಲ್‌ಡಿಇ ಆಸ್ಪತ್ರೆಯಲ್ಲಿ ಮಧುಮೇಹರೋಗಕ್ಕೆ ಲಭ್ಯವಿರುವ ಚಿಕಿತ್ಸಾ ಸೌಲಭ್ಯಗಳನ್ನು ಸದುಪಯೋಗ ಮಾಡಿಕೊಳ್ಳಬೇಕೆಂದರು.

ಕಾಲೇಜಿನ ಉಪಪ್ರಾಚಾರ್ಯ ಡಾ.ಎಂ.ಬಿ.ಪಾಟೀಲ, ಪ್ರಾಧ್ಯಾಪಕ ಡಾ.ಗಿರೀಶ ಕುಲ್ಲೊಳ್ಳಿ, ಡಾ. ರಮಾಕಾಂತ ಬಳೂರಕರ, ಡಾ.ಶೃತಿ ಶೀಳಿನ, ಡಾ.ಮಂಜುನಾಥ ಸಾವಂತ, ಡಾ.ಪ್ರದೀಪ ಜಾಜು, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಾದ ಡಾ.ನರೇಂದ್ರ, ಡಾ.ಸಕೇತ, ಡಾ.ದಿವ್ಯಾಂಗ, ಡಾ.ಈಶ್ವರ, ಡಾ. ಶ್ರೀಯಾ ಇದ್ದರು. ಉಚಿತ ಶಿಬಿರದಲ್ಲಿ ಸುಮಾರು 150ಕ್ಕೂ ಹೆಚ್ಚು ಮಧುಮೇಹಿಗಳು ಪ್ರಯೋಜನ ಪಡೆದರು.

Vol.21, Issue no. 102

# ಕಣ್ಣಿನ ಉಚಿತ ಶಸ್ತ್ರಚಿಕಿತ್ಸಾ ಶಿಬಿರ ಇಂದು

**ತಾಳಿಕೋಟೆ:** ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವಿಜಯಪುರ ಜಿಲ್ಲಾ ಅಂಧತ್ವ ನಿವಾರಣಾ ಸಂಸ್ಥೆ, ಶ್ರೀ ಬಿ. ಎಂ. ಪಾಟೀಲ್ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ ಮತ್ತು ತಾಳಿಕೋಟೆ ಸಮುದಾಯ ಆರೋಗ್ಯ ಕೇಂದ್ರ ಸಹಯೋಗದೊಂದಿಗೆ ನೇತ್ರ ತಪಾಸಣೆ ಹಾಗೂ ಕಣ್ಣಿನ ಶಸ್ತ್ರಚಿಕಿತ್ಸೆ ಶಿಬಿರವು ನ. 20ರಂದು ಬೆಳಿಗ್ಗೆ 9ರಿಂದ ಮಧ್ಯಾಹ್ನ 1ರವರೆಗೆ ನಡೆಯಲಿದೆ.

ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿಸಿಕೊಳ್ಳುವವರು ಬರುವಾಗ ಆಧಾರ್ ಕಾರ್ಡ್, ವೋಟರ್ ಐಡಿ, ಬಿಪಿಎಲ್ ಕಾರ್ಡ್ ಮತ್ತು ಫೋನ್ ನಂಬರ್ ತರಬೇಕು ಎಂದು ಪ್ರಕಟಣೆ ತಿಳಿಸಿದೆ.

BLDE

(DEEMED TO BE UNIVERSITY)

**Department of Central Library**

## NEWS PAPER CLIPPINGS

## NOVEMBER 2023 21.11.2023

# ಮಧುಮೇಹಿಗಳು ಪಾದಗಳ ಕಾಳಜಿ ವಹಿಸಲಿ

ವಿಜಯಪುರ : ಮಧುಮೇಹ ಸಮಸ್ಯೆ ಎದುರಿಸುತ್ತಿರುವವರು ಪಾದಗಳ ಆರೋಗ್ಯಕ್ಕೆ ಒತ್ತು ನೀಡಬೇಕು ಎಂದು ಬಿ.ಎಲ್.ಡಿ.ಇ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ ಹೇಳಿದರು.

ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ.ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರ ಚಿಕಿತ್ಸಾ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ ಉಚಿತ ಮಧುಮೇಹ ಪಾದರೋಗ ತಪಾಸಣೆ ಮತ್ತು ಚಿಕಿತ್ಸಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹೆಚ್ಚು ಮಧುಮೇಹಿಗಳು ದೇವಾಲಯ ದರ್ಶನಕ್ಕೆ ಬರಿಗಾಲಲ್ಲಿ ನಡೆದುಕೊಂಡು ಹೋಗುತ್ತಾರೆ. ಆಗ ಪಾದದ ಸಮಸ್ಯೆಗೆ ಒಳಗಾಗುತ್ತಾರೆ. ಆದ್ದರಿಂದ ಮಧುಮೇಹಿಗಳು ಮನೆಯೇ ದೇವಾಲಯವೆಂದು ತಿಳಿದು ಆದಷ್ಟು ಜಾಗೃತೆ ವಹಿಸಬೇಕು. ಮಧುಮೇಹಿಗಳು ಪಾಲಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳನ್ನು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ ಮಾತನಾಡಿ, ಭಾರತವು ಮಧುಮೇಹದಲ್ಲಿ ವಿಶ್ವದ ರಾಜಧಾನಿಯಾಗುತ್ತಿದೆ. ಮಧುಮೇಹಿಗಳು ರಕ್ತದಲ್ಲಿರುವ ಸಕ್ಕರೆ ಪ್ರಮಾಣವನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳದಿದ್ದರೆ ದೀರ್ಘಕಾಲೀನ ತೊಂದರೆಗಳು ಉಂಟಾಗುತ್ತವೆ. ಹೀಗಾಗಿ ಆರೋಗ್ಯದ ಬಗ್ಗೆ ಜಾಗೃತಿ ವಹಿಸಬೇಕು ಎಂದರು.

ಕಾಲೇಜಿನ ಉಪಪ್ರಾಚಾರ್ಯ ಡಾ. ಎಂ.ಬಿ. ಪಾಟೀಲ, ಪ್ರಾಧ್ಯಾಪಕರಾದ ಡಾ. ಗಿರೀಶ ಕುಲ್ಲೊಳ್ಳಿ, ಡಾ. ರಮಾಕಾಂತ ಬಳೂರಕರ, ಡಾ. ಶ್ರುತಿ ಶೀಳಿನ, ಡಾ. ಮಂಜುನಾಥ ಸಾವಂತ, ಡಾ. ಪ್ರದೀಪ ಜಾಜು, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಾದ ಡಾ. ನರೇಂದ್ರ, ಡಾ. ಸಕೇತ, ಡಾ. ದಿವ್ಯಾಂಗ, ಡಾ. ಈಶ್ವರ, ಡಾ. ಶ್ರೀಯಾ ಉಪಸ್ಥಿತರಿದ್ದರು.

ಈ ಉಚಿತ ಸಪ್ತಾಹ ಶಿಬಿರದಲ್ಲಿ ಸುಮಾರು 150 ಕ್ಕೂ ಹೆಚ್ಚು ಮಧುಮೇಹಿಗಳಿಗೆ ತರಬೇತಿ ನೀಡಲಾಯಿತು. ಈ ಶಿಬಿರದಲ್ಲಿ ಉಚಿತವಾಗಿ ರಕ್ತ ತಪಾಸಣೆ, ಮೋನೊಫಿಲಾಮೆಂಟ್, ಬಯೋಥೀಸಿಯೊ ಮೀಟರ್, ಹ್ಯಾರಿಸ್ ಮ್ಯಾಟ್, ಹ್ಯಾಂಡ್ ಹೆಲ್ಡ್ ಡಾಪ್ಲರ್ ತಪಾಸಣೆಗಳನ್ನು ಮಾಡಿದರು. ಅಲ್ಲದೇ, ಅಗತ್ಯವಿರುವ ರೋಗಿಗಳಿಗೆ ಚಿಕಿತ್ಸೆಯನ್ನು ನೀಡಲಾಯಿತು.




ವಿಜಯಪುರದಲ್ಲಿ ಏರ್ಪಡಿಸಲಾಗಿದ್ದ ಉಚಿತ ಮಧುಮೇಹ ಚಿಕಿತ್ಸಾ ಶಿಬಿರದಲ್ಲಿ ಡಾ. ಮಂಜುನಾಥ ಕೋಟೆಣ್ಣವರ ಮಾತನಾಡಿದರು.

BLDE

(DEEMED TO BE UNIVERSITY)

**Department of Central Library**

**NEWS PAPER CLIPPINGS**
**NOVEMBER 2023 28.11.2023**

# ಮಧುಮೇಹಿಗಳು ಪಾದಗಳ ಕಾಳಜಿ ವಹಿಸಲಿ

ವಿಜಯಪುರ : ಮಧುಮೇಹ ಸಮಸ್ಯೆ ಎದುರಿಸುತ್ತಿರುವವರು ಪಾದಗಳ ಆರೋಗ್ಯಕ್ಕೆ ಒತ್ತು ನೀಡಬೇಕು ಎಂದು ಬಿ.ಎಲ್.ಡಿ.ಇ ಆಸ್ಪತ್ರೆಯ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ ಹೇಳಿದರು.

ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ.ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರ ಚಿಕಿತ್ಸಾ ವಿಭಾಗದ ವತಿಯಿಂದ ಆಯೋಜಿಸಲಾಗಿದ್ದ ಉಚಿತ ಮಧುಮೇಹ ಪಾದರೋಗ ತಪಾಸಣೆ ಮತ್ತು ಚಿಕಿತ್ಸಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಹೆಚ್ಚು ಮಧುಮೇಹಿಗಳು ದೇವಾಲಯ ದರ್ಶನಕ್ಕೆ ಬರಿಗಾಲಲ್ಲಿ ನಡೆದುಕೊಂಡು ಹೋಗುತ್ತಾರೆ. ಆಗ ಪಾದದ ಸಮಸ್ಯೆಗೆ ಒಳಗಾಗುತ್ತಾರೆ. ಆದ್ದರಿಂದ ಮಧುಮೇಹಿಗಳು ಮನೆಯೇ ದೇವಾಲಯವೆಂದು ತಿಳಿದು ಅದಷ್ಟು ಜಾಗೃತೆ ವಹಿಸಬೇಕು. ಮಧುಮೇಹಿಗಳು ಪಾಲಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳನ್ನು ಪ್ರಾತ್ಯಕ್ಷಿಕೆ ಮೂಲಕ ವಿವರಿಸಿದರು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ ಮಾತನಾಡಿ, ಭಾರತವು ಮಧುಮೇಹದಲ್ಲಿ ವಿಶ್ವದ ರಾಜಧಾನಿಯಾಗುತ್ತಿದೆ. ಮಧುಮೇಹಿಗಳು ರಕ್ತದಲ್ಲಿರುವ ಸಕ್ಕರೆ ಪ್ರಮಾಣವನ್ನು ನಿಯಂತ್ರಣದಲ್ಲಿ ಇಟ್ಟುಕೊಳ್ಳದಿದ್ದರೆ ದೀರ್ಘಕಾಲೀನ ತೊಂದರೆಗಳು ಉಂಟಾಗುತವೆ. ಹೀಗಾಗಿ ಆರೋಗ್ಯದ ಬಗ್ಗೆ ಜಾಗೃತಿ ವಹಿಸಬೇಕು ಎಂದರು.

ಕಾಲೇಜಿನ ಉಪಪ್ರಾಚಾರ್ಯ ಡಾ. ಎಂ.ಬಿ. ಪಾಟೀಲ, ಪ್ರಾಧ್ಯಾಪಕರಾದ ಡಾ. ಗಿರೀಶ ಕುಲ್ಲೊಳ್ಳಿ, ಡಾ. ರಮಾಕಾಂತ ಬಳೂರಕರ, ಡಾ. ಶ್ರುತಿ ಶೀಳಿನ, ಡಾ. ಮಂಜುನಾಥ ಸಾವಂತ, ಡಾ. ಪ್ರದೀಪ ಜಾಬು, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಾದ ಡಾ. ನರೇಂದ್ರ, ಡಾ. ಸಕೇತ, ಡಾ. ದಿವ್ಯಾಂಗ, ಡಾ. ಈಶ್ವರ, ಡಾ. ಶ್ರೀಯಾ ಉಪಸ್ಥಿತರಿದ್ದರು.

ಈ ಉಚಿತ ಸಪ್ತಾಹ ಶಿಬಿರದಲ್ಲಿ ಸುಮಾರು 150 ಕ್ಕೂ ಹೆಚ್ಚು ಮಧುಮೇಹಿಗಳಿಗೆ ತರಬೇತಿ ನೀಡಲಾಯಿತು. ಈ ಶಿಬಿರದಲ್ಲಿ ಉಚಿತವಾಗಿ ರಕ್ತ ತಪಾಸಣೆ, ಮೋನೊಫಿಲಾಮೆಂಟ್, ಬಯೋಥೀಸಿಯೊ ಮೀಟರ್, ಹ್ಯಾರಿಸ್ ಮ್ಯಾಟ್, ಹ್ಯಾಂಡ್ ಹೆಲ್ಡ್ ಡಾಪ್ಲರ್ ತಪಾಸಣೆಗಳನ್ನು ಮಾಡಿದರು. ಅಲ್ಲದೇ, ಅಗತ್ಯವಿರುವ ರೋಗಿಗಳಿಗೆ ಚಿಕಿತ್ಸೆಯನ್ನು ನೀಡಲಾಯಿತು.




ವಿಜಯಪುರದಲ್ಲಿ ಏರ್ಪಡಿಸಲಾಗಿದ್ದ ಉಚಿತ ಮಧುಮೇಹ ಚಿಕಿತ್ಸಾ ಶಿಬಿರದಲ್ಲಿ ಡಾ. ಮಂಜುನಾಥ ಕೋಟೆಣ್ಣವರ ಮಾತನಾಡಿದರು.

# ಸ್ತನಗಳಲ್ಲಿನ ಎಲ್ಲ ಗಂಟುಗಳು ಕ್ಯಾನ್ಸರ್ ಅಲ್ಲ: ಡಾ.ವಿಜಯಾ



• **ಕನ್ನಡಪ್ರಭ ವಾರ್ತೆ** ವಿಜಯಪುರ

ಸ್ತನಗಳಲ್ಲಿ ಉಂಟಾಗುವ ಎಲ್ಲ ಗಂಟುಗಳು ಸ್ತನ ಕ್ಯಾನ್ಸರ್‌ಅಲ್ಲ ಎಂದು ಬಿಎಲ್‌ಡಿಇ ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ ಪ್ರಾಧ್ಯಾಪಕಿ ಡಾ.ವಿಜಯಾ ಪಾಟೀಲ ಹೇಳಿದರು.

ಬಿಎಲ್‌ಡಿಇ ಡೀಮ್ಡ್ ವಿಶ್ವವಿದ್ಯಾಲಯದ ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರ ಚಿಕಿತ್ಸಾ ವಿಭಾಗ ಮತ್ತು ಮಹಿಳಾ ಸಬಲೀಕರಣ ವಿಭಾಗದ ವತಿಯಿಂದ ಆಸ್ಪತ್ರೆಯ ಉಪನ್ಯಾಸ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಸ್ತನ ಕ್ಯಾನ್ಸರ್‌ಜಾಗೃತಿ ಮತ್ತು ತಪಾಸಣೆ ಶಿಬಿರದಲ್ಲಿ ಮಾತನಾಡಿದ ಅವರು, ಎಲ್ಲ ಸ್ತನ ಗಂಟುಗಳು ಸ್ತನ ಕ್ಯಾನ್ಸರ್‌ಅಲ್ಲ, ಸ್ತನ ಕ್ಯಾನ್ಸರನ್ನು ತ್ರಿವಿಧದ ಪರೀಕ್ಷೆಗಳಾದ ಸ್ವಯಂ ಪರೀಕ್ಷಣೆ, ಮ್ಯಾಮೋಗ್ರಾಫಿ ಮತ್ತು ಸೂಜಿ ತಪಾಸಣೆ (ಊಫೆಅಇ) ಗಳಿಂದ ಆರಂಭದ ಹಂತದಲ್ಲಿಯೇ ಪತ್ತೆ ಮಾಡಬಹುದು ಎಂದರು. ಇದೇ ವೇಳೆ ಅವರು ಸ್ತನದ ಸ್ವಯಂ ತಪಾಸಣೆಯ ವಿಧಾನವನ್ನು ಪ್ರಾತ್ಯಕ್ಷಿಕೆಯೊಂದಿಗೆ ವಿವರಿಸಿದರು. ಕಾಲೇಜಿನ ಉಪಪ್ರಾಂಶುಪಾಲ ಡಾ.ಎಂ.ಬಿ.ಪಾಟೀಲ ಶಿಬಿರ ಉದ್ಘಾಟಿಸಿ ಮಾತನಾಡಿ, ಶೇ.99ರಷ್ಟು ಸ್ತನ ಕ್ಯಾನ್ಸರ್‌ಪ್ರಕರಣಗಳು ಸ್ತ್ರೀಯರಲ್ಲಿ ಕಂಡುಬಂದರೇ ಶೇ.1ರಷ್ಟು ಪುರುಷರಲ್ಲೂ ಕಾಣಬಹುದು. ಸ್ತನ ಕ್ಯಾನ್ಸರ್‌ಗೆ ಮೂರು ಪ್ರಮುಖ ಕಾರಣಗಳಿವೆ. ಸ್ತ್ರೀಯರಲ್ಲಿನ ಈಸ್ಟ್ರೋಜನ್ ಹಾರ್ಮೋನ್, ಹೆಚ್ಚಿನ ವಯಸ್ಸು ಮತ್ತು ಅನುವಂಶೀಯತೆ. ಇದನ್ನು ಪ್ರಾಥಮಿಕ ಹಂತದಲ್ಲಿಯೇ ಕಂಡು ಹಿಡಿದರೆ ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯವಿದೆ ಎಂದರು. ಶಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ.ಮಂಜುನಾಥ ಕೋಟೆಣ್ಣವರ ಮಾತನಾಡಿ, ಸ್ತನ ಕ್ಯಾನ್ಸರ್‌ನ ಜಾಗೃತಿಯ ಮಹತ್ವವನ್ನು ತಿಳಿಸಿದರು. ವೈದ್ಯಕೀಯ ತಪಾಸಣೆ (ಖ್ಚಿಛಿಳ್ಜಿಜ)ಯಿಂದ ಆರಂಭಿಕ ಹಂತದಲ್ಲಿಯೇ ಅದನ್ನು ಕಂಡು ಹಿಡಿದಲ್ಲಿ ಮುಂದೆ ಆಗಬಹುದಾದ ಶಾರೀರಿಕ, ಸಾಮ್ಹಾಜಿಕ ಮತ್ತು ಆರ್ಥಿಕ ತೊಂದರೆಗಳನ್ನು ತಪ್ಪಿಸಬಹುದು ಎಂದರು. ಈ ಸಂದರ್ಭದಲ್ಲಿ ಬಿಎಲ್‌ಡಿಇ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ರಾಜೇಶ.ಹೊನ್ನುಟಗಿ, ರೋಗಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಸುರೇಖಾ.ಹಿಪ್ಪರಗಿ, ರೇಡಿಯಾಲಜಿ ವಿಭಾಗದ ಮುಖ್ಯಸ್ಥ ಡಾ.ರಾಜಶೇಖರ ಮುಚ್ಚಂಡಿ, ಸಹಾಯಕ ಪ್ರಾಧ್ಯಾಪಕ ಡಾ.ಅನಿಕೇತನ, ಡಾ.ಪ್ರಮೋದ.ಪಾಟೀಲ, ಡಾ.ಅಕ್ಷಿನಿ ನುಚ್ಚಿ, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಾದ ಡಾ.ಯಶಸ್ವಿನಿ, ಡಾ.ಶ್ರೀಯಾ ಮುಂತಾದವರು ಉಪಸ್ಥಿತರಿದ್ದರು. ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿನಿ ಡಾ.ಲಿನೆಟ್ ನಿರೂಪಿಸಿದರು. ಮಹಿಳಾ ಸಬಲೀಕರಣ ವಿಭಾಗದ ಸಂಚಾಲಕ ಡಾ.ರೂಪಾ ಶಹಾಪೂರ ವಂದಿಸಿದರು. ಶಿಬಿರದಲ್ಲಿ ಬಿಎಲ್‌ಡಿಇ ನರ್ಸಿಂಗ್ ಮಹಾವಿದ್ಯಾಲಯದ ಮಹಿಳಾ ಸಿಬ್ಬಂದಿ, ವಿದ್ಯಾರ್ಥಿಗಳು ಮತ್ತು ವೈದ್ಯಕೀಯ ಮಹಾವಿದ್ಯಾಲಯದ ಮಹಿಳಾ ಸಿಬ್ಬಂದಿ ಭಾಗವಹಿಸಿದ್ದರು. ಸುಮಾರು 30 ಜನರಿಗೆ ಉಚಿತವಾಗಿ ಮ್ಯಾಮೋಗ್ರಾಫಿ ತಪಾಸಣೆ ಮಾಡಲಾಯಿತು.

pv. 3p. 30/11/23

# ಡಾ.ಕುಶಾಲ್ ದಾಸ್‌ಗೆ ರಾಜ್ಯ ಪ್ರಶಸ್ತಿ

(1)

ಪ್ರಜಾವಾಣಿ ವಾರ್ತೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಬಿ.ಎಂ. ಪಾಟೀಲ ವೈದ್ಯಕೀಯ ಕಾಲೇಜಿನ ಫಿಜಿಯಾಲಜಿ ವಿಭಾಗದ ಡಿಸ್ಟಿಂಗ್ವಿಶ್ಡ್ ಚೇರ್ ಪ್ರೊಫೆಸರ್ ಡಾ.ಕುಶಾಲ್ ಕೆ. ದಾಸ್ ಅವರನ್ನು ರಾಜ್ಯ ಸರ್ಕಾರವು ಅಂಗವಿಕಲರ ಕ್ಷೇತ್ರದಲ್ಲಿನ ಸೇವೆಗಾಗಿ ರಾಜ್ಯ ಮಟ್ಟದ ವೈಯಕ್ತಿಕ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಡಿ.3ರಂದು ವಿಶ್ವ ಅಂಗವಿಕಲರ ದಿನದಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.



ಕುಶಾಲ್ ದಾಸ್

ವವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಅಂಗವಿಕಲ ವ್ಯಕ್ತಿ/ಅಂಗವಿಕಲರ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸುತ್ತಿರುವುದನ್ನು ಗುರುತಿಸಿ ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಕುಶಾಲ್ ದಾಸ್ ಅವರಿಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷರೂ ಆದ ಸಚಿವ ಎಂ.ಬಿ. ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

---



(2)

ಸುದ್ದಿ ಮಿಂಚು

## ರಾಜ್ಯ ಪ್ರಶಸ್ತಿಗೆ ಆಯ್ಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಬಿ.ಎಂ. ಪಾಟೀಲ ಪಾಟೀಲ ವೈದ್ಯಕೀಯ ಕಾಲೇಜಿನ ಫಿಜಿಯಾಲಜಿ ವಿಭಾಗದ ಡಿಸ್ಟಿಂಗ್ವಿಷ್ಡ್ ಚೇರ್ ಪ್ರೊ.ಡಾ.ಕುಶಾಕ ಕೆ. ದಾಸ್ ಅವರಿಗೆ ರಾಜ್ಯ ಸರಕಾರ ವಿಕಲಚೇತನರ ಕ್ಷೇತ್ರದಲ್ಲಿನ ಸೇವೆಗಾಗಿ ರಾಜ್ಯ ಮಟ್ಟದ ವೈಯಕಿಕ ರಾಜ್ಯ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.



ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನದಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಬೆಳಗ್ಗೆ 9 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ವಿಕಲಚೇತನ ವ್ಯಕ್ತಿ/ವಿಕಲಚೇತನರ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸುತ್ತಿರುವುದನು, ಗುರುತಿಸಿ ವೈಯಕಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಈ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಡಾ.ಕುಶಾಲ ದಾಸ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ.ಬಿ.ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

---

(1) News paper — prajavani
Date — 30/11/23
Page No — 03p.

(2) Samyukta Karnata
Date — 30/11/2023
Page — 02

(1)

VK. BS. P. 30/11/23

# ಡಾ. ಕುಶಾಲ್‌ದಾಸ್‌ಗೆ ರಾಜ್ಯ ಮಟ್ಟದ ಪ್ರಶಸ್ತಿ

**ವಿಜಯಪುರ:** ನಗರದ ಬಿಎಲ್‌ಡಿಇ ಡೀಮ್ಡ್ ವಿವಿಯ



ಬಿ.ಎಂ. ಪಾಟೀಲ ಪಾಟೀಲ ವೈದ್ಯಕೀಯ ಕಾಲೇಜಿನ ಫಿಜಿಯಾಲಜಿ ವಿಭಾಗದ ಡಿಸ್ಟಿಂಗ್ವಿಸ್ಡ್ ಚೇರ್ ಪ್ರೊಫೆಸರ್ ಡಾ. ಕುಶಾಕ ಕೆ. ದಾಸ್ ಅವರಿಗೆ ರಾಜ್ಯ ಸರಕಾರ ವಿಶೇಷಚೇತನರ ಕ್ಷೇತ್ರದಲ್ಲಿಯ ಸೇವೆಗಾಗಿ ರಾಜ್ಯ ಮಟ್ಟದ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಿದೆ.

ಡಿ. 3 ರಂದು ವಿಶ್ವ ವಿಶೇಷಚೇತನರ ದಿನದಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಬೆಳಗ್ಗೆ 9 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಎಸ್. ಸಿದ್ದರಾಮಯ್ಯ ಅವರು ಕುಶಾಲ್ ದಾಸ್‌ಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ನಾನಾ ಕ್ಷೇತ್ರಗಳಲ್ಲಿ ವಿಶಿಷ್ಟವಾದ ಸೇವೆ ಸಲ್ಲಿಸಿದ ವಿಶೇಷಚೇತನ ವ್ಯಕ್ತಿ/ ವಿಶಿಷ್ಟ ಸೇವೆಯನ್ನು ಸಲ್ಲಿಸುತ್ತಿರುವುದನ್ನು ಗುರುತಿಸಿ ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಶೇಷಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಡಾ. ಕುಶಾಲ್ ಕೆ. ದಾಸ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಬಿಎಲ್‌ಡಿಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

ಿಲ್ಲೆಗೆ ಪ್ರೋತಾಹಕ ಪಾರಿತೋಷಕ

News paper - vijaykarnataka
Date - 30/11/2023
Page No - 05

(2)

KP. Oup.

## ಸುದ್ದಿ ಸಿಂಚನ

Kannad. 30.11.2

# ಕುಶಾಲ ದಾಸರಿಗೆ ರಾಜ್ಯ ಪ್ರಶಸ್ತಿ

**ವಿಜಯಪುರ:** ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜಿನ ಫಿಜಿಯಾಲಜಿ ವಿಭಾಗದ ಡಿಸ್ಟಿಂಗ್ವಿಷ್ಡ್ ಚೇರ್ ಪ್ರೊಫೆಸರ್ ಡಾ. ಕುಶಾಲ ಕೆ. ದಾಸ್ ಅವರಿಗೆ ರಾಜ್ಯ ಸರಕಾರ ವಿಕಲಚೇತನರ ಕ್ಷೇತ್ರದಲ್ಲಿನ ಸೇವೆಗಾಗಿ



ರಾಜ್ಯ ಮಟ್ಟದ ವೈಯಕ್ತಿಕ ಪ್ರಶಸ್ತಿಗೆ ಆಯ್ಕೆ ಮಾಡಿದೆ. ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನದಂದು ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಬೆಳಗ್ಗೆ 9 ಗಂಟೆಗೆ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಎಸ್. ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ನಾನಾ ಕ್ಷೇತ್ರಗಳಲ್ಲಿ ವಿಶಿಷ್ಟವಾದ ಸೇವೆ ಸಲ್ಲಿಸಿದ ವಿಕಲಚೇತನ ವ್ಯಕ್ತಿ, ವಿಕಲಚೇತನರ ಕ್ಷೇತ್ರದಲ್ಲಿ ವಿಶಿಷ್ಟ ಸೇವೆಯನ್ನು ಸಲ್ಲಿಸುತ್ತಿರುವುದನ್ನು ಗುರುತಿಸಿ ವೈಯಕ್ತಿಕ ವಿಭಾಗದಡಿ ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಡಾ. ಕುಶಾಲ್ ಕೆ. ದಾಸ್ ಅವರು ಪ್ರಶಸ್ತಿಗೆ ಆಯ್ಕೆಯಾಗಿರುವುದಕ್ಕೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ ಅಭಿನಂದನೆ ಸಲ್ಲಿಸಿದ್ದಾರೆ.

News paper - kannadaprabha
Date - 30/11/2023
Page No - 04.

# BLDE

**(Deemed to be University)**

**Declared as Deemed to be University u/s 3 of UGC Act 1956**

**Accredited with 'A' Grade by NAAC (Cycle-2)**

**Smt. Bangaramma Sajjan Campus, B.M.Patil Road, VIJAYAPURA-586103, (KARNATAKA)**

## APPLICATIONS ARE INVITED FOR ACADEMIC & ADMINISTRATIVE POSITIONS

1) **Professor of Practice**
2) **Director - IQAC**
3) **Director - Academic Affairs**
4) **Finance Officer**
5) **Librarian**
6) **Dy. Controller of Examinations**
7) **Assistant Registrar**
8) **Assistant Finance Officer**
9) **Manager - Human Resources**
10) **Manager - Branding & Marketing**
11) **Manager - International Relations**
12) **Estate cum Environment Officer**
13) **Administrator - Clinical Services**
14) **Vigilance Officer**
15) **PS to Vice-Chancellor**
16) **Junior Research Officer**
17) **Stenographer**

The desirous candidates possessing requisite qualification and experience may submit their applications via email: careers@bldedu.ac.in. The last date for submitting the application is **13-12-2023**. The short listed candidates will be called for interview. The BLDE (DU) reserves the right to modify/add/delete the posts or cancel the Recruitment Proccess at any stage as per the requirement.

For more details visit our website: **www.bldedu.ac.in/careers**

**Date: 29-11-2023**

**Sd/-**
**Registrar**

News paper — Udaya vani
Date — 30/11/2023
Page No — 3p.